159ಅ೮೮

77

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಟಿ.ಎನ್.ಜವರಾಯಿಗೌಡ ಇವರು ನಿಯಮ 73ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಸಾರಿಗೆ ಸಚಿವರ ಉತ್ತರ**

**ಪ್ರಶ್ನೆ:**

ವಿದ್ಯುತ್ ಚಾಲಿತ ವಾಹನಗಳ ಬಳಕೆ ಉತ್ತೇಜಿಸಲು ಹಾಗೂ ಐಟಿ ಸಿಟಿ ಬೆಂಗಳೂರಿನ ವಾಯುಮಾಲಿನ್ಯ ತಡೆಗಟ್ಟುವ ಜತೆಗೆ ಪರಿಸರಸ್ನೇಹಿ ಸಾರಿಗೆ ವ್ಯವಸ್ಥೆ ರೂಪಿಸಲು ಸಹಕಾರಿಯಾಗಬೇಕಿದ್ದ ಎಲೆಕ್ಟ್ರಿಕ್ ಬಸ್‌ಗಳ ಖರೀದಿಗೆ ರಾಜ್ಯ ಸರ್ಕಾರ ಮೀನಮೇಷ ಎಣಿಸುತ್ತಿರುವುದು ಇತರ ರಾಜ್ಯಗಳಿಗೆ ಅವಕಾಶದ ಬಾಗಿಲು ತೆರದಂತಾಗಿದೆ. ಈ ಬಗ್ಗೆ ದಿನಾಂಕ:14.07.2026ರ ವಿಜಯ ಕರ್ನಾಟಕ ಪತ್ರಿಕೆಯಲ್ಲೂ ವರದಿಯಾಗಿದೆ. ಪಿ.ಎಂ.ಇ-ಡ್ರೈವ್ ಯೋಜನೆಯಡಿ ಬೆಂಗಳೂರು ನಗರಕ್ಕೆ ಅನುಮೋದನೆ ನೀಡಲಾಗಿದ್ದ ಸುಮಾರು 4500 ಎಲೆಕ್ಟ್ರಿಕ್ ಬಸ್‌ಗಳ ಖರೀದಿಯಲ್ಲಿ ವಿಳಂಬವಾಗುತ್ತಿದ್ದು, ಬೇರೆ ರಾಜ್ಯಗಳು ಹೆಚ್ಚುವರಿ ಬಸ್ ಖರೀದಿಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿವೆ. ಇದರಿಂದ ಕೇಂದ್ರ ಸರ್ಕಾರ ನಿಗದಿಪಡಿಸಿದ್ದ ಸಬ್ಸಿಡಿ ಹಣ ಕೈತಪ್ಪುವ ಸಾಧ್ಯತೆ ಹೆಚ್ಚಾಗಿದೆ. ಕೇಂದ್ರ ಸರ್ಕಾರದ ಯೋಜನೆ ಮೂಲಕ 4500 ಹೊಸ ಬಸ್‌ಗಳ ಖರೀದಿಗೆ 2025 ರಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದರೂ ರಾಜ್ಯ ಸರ್ಕಾರ ಸಚಿವ ಸಂಪುಟದ ಅನುಮೋದನೆ ನೀಡಲು ವಿಳಂಬ ಮಾಡುತ್ತಿರುವುದರಿಂದ ಬೇರೆ ರಾಜ್ಯ ಹಾಗೂ ನಗರಗಳು ಹೆಚ್ಚುವರಿಯಾಗಿ ಬಸ್‌ಗಳಿಗಾಗಿ ಬೇಡಿಕೆ ಇಟ್ಟಿರುವುದು ತಿಳಿದು ಬಂದಿದೆ. ಆದ್ದರಿಂದ ಕೇಂದ್ರ ಸರ್ಕಾರದ ಸಬ್ಸಿಡಿ ಹಣ ಬಳಸಿಕೊಂಡು ಸುಮಾರು 4500 ಎಲೆಕ್ಟ್ರಿಕ್ ಬಸ್‌ಗಳನ್ನು ಖರೀದಿಸಲು ಸರ್ಕಾರ ಕೂಡಲೇ ಅನುಮೋದನೆ ನೀಡಿ ಸಾರ್ವಜನಿಕ ಸೇವೆಗೆ ಈ ಬಸ್‌ಗಳನ್ನು ಬಳಸಿಕೊಳ್ಳುವ ಸಲುವಾಗಿ ನಿಯಮ 72ರ ಮೇರೆಗೆ ಸರ್ಕಾರದ ಗಮನ ಸೆಳೆಯುತ್ತೇನೆ.

**ಉತ್ತರ:**

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಪ್ರಸ್ತುತ 6945 ವಿವಿಧ ಮಾದರಿಯ ಬಸ್ಸುಗಳನ್ನು ನಗರದ ಸಾರ್ವಜನಿಕ ಪ್ರಯಾಣಿಕರಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಲು ಕಾರ್ಯಾಚರಣೆ ಮಾಡುತ್ತಿರುತ್ತದೆ. ಅವುಗಳಲ್ಲಿ ವಿಶೇಷವಾಗಿ ವಾಯುಮಾಲಿನ್ಯ ತಡೆಗಟ್ಟುವ ಉದ್ದೇಶದಿಂದ 1779 ಎಲೆಕ್ಟ್ರಿಕ್ ಬಸ್ಸುಗಳನ್ನು ಜಿ.ಸಿ.ಸಿ. ಆಧಾರದ ಮೇಲೆ ಆಚರಣೆ ಮಾಡಲಾಗುತ್ತಿದೆ. ಕೇಂದ್ರ ಸರ್ಕಾರದ ಪಿಎಂ-ಇ-ಡ್ರೈವ್ ಯೋಜನೆಯಡಿ ಬೆಂಗಳೂರು ನಗರಕ್ಕೆ 4500 ಎಲೆಕ್ಟ್ರಿಕ್ ಬಸ್ಸುಗಳನ್ನು ಜಿ.ಸಿ.ಸಿ. ಆಧಾರದ ಮೇಲೆ ಆಚರಣೆ ಮಾಡಲು ಮಂಜೂರಾತಿ ನೀಡಿದ್ದು, ಟೆಂಡರ್ ಪ್ರಕ್ರಿಯೆಯು ಪೂರ್ಣಗೊಂಡಿದ್ದು, ಟೆಂಡರ್‌ನಲ್ಲಿ ಆಯ್ಕೆಯಾದ ಕಂಪನಿಗಳಿಗೆ ಕಾರ್ಯಾದೇಶ ನೀಡುವ ಕುರಿತು ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುತ್ತದೆ.

ಸಂಖ್ಯೆ: ಟಿಡಿ 251 ಟಿಸಿಕ್ಯೂ 2026

(ಬಿ.ಎಸ್. ಸುರೇಶ)
ಸಾರಿಗೆ ಸಚಿವರು